## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 372

ಸದಸ್ಯರ ಹೆಸರು : ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 19.08.2026

ಉತ್ತರಿಸುವ ಸಚಿವರು : ಮಾನ್ಯ ಆಹಾರ, ನಾಗರಿಕ ಸರಬರಾಜು, ಗ್ರಾಹಕರ ವ್ಯವಹಾರಗಳ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಸಿಂಧನೂರು ನಗರದ ಹೃದಯ ಭಾಗದಲ್ಲಿರುವ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಒಡೆತನದ ಗೋದಾಮು ಜಾಗದ ಮೂರು ದಿಕ್ಕಿನಲ್ಲಿಯೂ ಕೆಲವು ಭಾಗದಲ್ಲಿ ಖಾಸಗಿ ವ್ಯಕ್ತಿಗಳು ಮಾಡಿದ್ದ ಅತಿಕ್ರಮಣ ಒತ್ತುವರಿಯನ್ನು ತೆರವುಗೊಳಿಸಲಾಗಿದೆಯೇ; | ಒತ್ತುವರಿ ತೆರವುಗೊಳಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ. ಒತ್ತುವರಿದಾರರು ಮಾನ್ಯ ನ್ಯಾಯಾಲಯದಲ್ಲಿ ದಾಖಲಿಸಿರುವ ಪ್ರಕರಣಗಳು ಇತ್ಯರ್ಥವಾದ ಕೂಡಲೇ ಬಾಕಿ ಒತ್ತುವರಿಯನ್ನು ತೆರವುಗೊಳಿಸಲಾಗುವುದು. |
| ಆ | ಸದರಿ ಗೋದಾಮನ್ನು ತೆರವುಗೊಳಿಸಿ, ವೈಜ್ಞಾನಿಕ ಗೋದಾಮುಗಳನ್ನು ನಿರ್ಮಾಣ ಮಾಡಲು ಪೂರ್ವ ಸಿದ್ಧತೆಗಳನ್ನು ಕೈಗೊಳ್ಳಲಾಗುತ್ತಿರುವುದಾಗಿ ಈ ಹಿಂದೆ ಮಾನ್ಯ ಸಚಿವರು ಸದನದಲ್ಲಿ ಉತ್ತರಿಸಿದ್ದು ಪ್ರಸ್ತುತ ಯಾವ ಹಂತದಲ್ಲಿದೆ; | ನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣಗಳು ಇತ್ಯರ್ಥವಾದ ಕೂಡಲೇ ವೈಜ್ಞಾನಿಕವಾಗಿ ಗೋದಾಮು ನಿರ್ಮಾಣ ಮಾಡುವ ಬಗ್ಗೆ ಪರಿಶೀಲಿಸಲಾಗುವುದು. |
| ಇ | ಸಿಂಧನೂರು ನಗರದ ಹೃದಯ ಭಾಗದಲ್ಲಿರುವ ಹೆಚ್ಚು ಬೆಲೆ ಬಾಳುವ ಜಾಗವಾಗಿದ್ದು, ಯಾವ ಕಾಲಮಿತಿಯೊಳಗೆ ಸದರಿ ಜಾಗದಲ್ಲಿ ನಿಗಮದಿಂದ ವೈಜ್ಞಾನಿಕ ಗೋದಾಮನ್ನು ನಿರ್ಮಾಣ ಮಾಡಿ ಸಾರ್ವಜನಿಕ ಬಳಕೆಗೆ ಒದಗಿಸಲಾಗುವುದು? | ಸದರಿ ಸ್ವತ್ತಿನಲ್ಲಿ ವೈಜ್ಞಾನಿಕ ಗೋದಾಮು ನಿರ್ಮಿಸಲು ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಒತ್ತುವರಿದಾರರು ಸಕ್ಷಮ ನ್ಯಾಯಾಲಯದಲ್ಲಿ ದಾಖಲಿಸಿರುವ ಪ್ರಕರಣಗಳು ಇತ್ಯರ್ಥವಾದ ಕೂಡಲೇ ಬಾಕಿ ಒತ್ತುವರಿಯನ್ನು ತೆರವುಗೊಳಿಸಿ, ಇರುವ ಜಾಗವನ್ನು ಸಂಪೂರ್ಣವಾಗಿ ಬಳಸಿಕೊಳ್ಳಲಾಗುತ್ತದೆ. |

ಇ-ಆನಾಸ 88 ಆರ್‌ಪಿಆರ್ 2026

(ರಿಜ್ವಾನ್ ಅರ್ಷದ್)
ಆಹಾರ, ನಾಗರಿಕ ಸರಬರಾಜು, ಗ್ರಾಹಕರ
ವ್ಯವಹಾರಗಳ ಸಚಿವರು